# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಎಸ್.ನಾಗೇಶ್ ನಿವೃತ್ತ ಕಾರ್ಯದರ್ಶಿ, ಉದ್ಬೂರು ಗ್ರಾಮ ಪಂಚಾಯಿತಿ ಮೈಸೂರು ತಾಲ್ಲೂಕು ಮತ್ತು ಮೈಸೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿ ಹಾಗೂ 214(2)(ಬಿ) ರಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

ಓದಲಾಗಿದೆ:

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅಸಪ ಸಂಖ್ಯೆ:D.O.NO.Compt/ UPLOK/MYS-9033/2017/DRE-4, dated:14.09.2018.

ಪ್ರಸ್ತಾವನೆ:

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ನಿಬಂಧಕರು ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ: 18.08.2018 ರ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

ಶ್ರೀ ಡಿ.ಮಹದೇವ ಬಿನ್ ದೇವಯ್ಯ, ಮೈಸೂರು ಜಿಲ್ಲೆ ಮತ್ತು ತಾಲ್ಲೂಕು ಜಯಪುರ ಹೋಬಳಿ ಉದ್ಬೂರು ಗ್ರಾಮ 6ನೇ ಬ್ಲಾಕ್ #1474 ರವರು (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪುತ್ತಾರೆ) ಉದ್ಬೂರು ಗ್ರಾಮ ಪಂಚಾಯತ್‌ನ ಸದಸ್ಯರಾದ ಶ್ರೀ ಕುಮಾರ ಬಿನ್ ನಿಂಗಣ್ಣ ರವರು 2008 ರಿಂದ 2010 ರವರೆಗೆ ಸದರಿಯವರು ಒಟ್ಟು ರೂ.4,39,876/–ಗಳನ್ನು ಕಾನೂನು ಬಾಹಿರವಾಗಿ ಪಡೆದುಕೊಂಡು ಕರ್ತವ್ಯ ಲೋಪ ಎಸಗಿದ್ದಾರೆಂದು ಆಪಾದಿಸಿದ್ದಾರೆ. 1) ಶ್ರೀ ಎಸ್.ನಾಗೇಶ್, ಕಾರ್ಯದರ್ಶಿ (ಪ್ರಸ್ತುತ ನಿವೃತ್ತ) ಉದ್ಬೂರು ಗ್ರಾಮ ಪಂಚಾಯಿತಿ ಮೈಸೂರು ತಾಲ್ಲೂಕು ಮತ್ತು ಮೈಸೂರು ಜಿಲ್ಲೆ ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿರುತ್ತಾರೆ.

**ದೂರಿನ ಸಂಕ್ಷಿಪ್ತ ವಿವರಣೆ:–** ಎದುರುದಾರರು ಗ್ರಾಮ ಪಂಚಾಯಿತಿ ನರೇಗಾ ಎಸ್.ಬಿ.ಖಾತೆ ಸಂ.2696 ರಿಂದ ಉದ್ಬೂರು ಕಾವೇರಿ ಗ್ರಾಮೀಣ ಬ್ಯಾಂಕ್‌ನಲ್ಲಿರುವ ತಮ್ಮ ವೈಯಕ್ತಿಕ ಖಾತೆ ಸಂಖ್ಯೆ:5415ಕ್ಕೆ ಒಟ್ಟು ರೂ.4,39,876/– ಗಳನ್ನು ವರ್ಗಾಯಿಸಿಕೊಂಡಿದ್ದಾರೆ. ಮುಂದುವರೆದು, 2008 ರಿಂದ 2010 ರವರೆಗೆ ಸದರಿಯವರು ಒಟ್ಟು ರೂ.4,39,876/–ಗಳನ್ನು ಕಾನೂನು ಬಾಹಿರವಾಗಿ ಪಡೆದುಕೊಂಡು ಕರ್ತವ್ಯ ಲೋಪ ಎಸಗಿದ್ದಾರೆಂದು ಆಪಾದಿಸಿದ್ದಾರೆ.

ದೂರಿನ ಬಗ್ಗೆ ವರದಿ ಸಲ್ಲಿಸುವಂತೆ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ಮೈಸೂರು (ಇನ್ನು ಮುಂದೆ 'ತನಿಖಾಧಿಕಾರಿಗಳು' ಎಂದು ಕರೆಯಲ್ಪಡುತ್ತಾರೆ) ರವರನ್ನು ಕೇಳಲಾಗಿ ಸದರಿಯವರು ತಮ್ಮ ವರದಿಯಲ್ಲಿ ಕೆಳಗಿನಂತೆ ತಮ್ಮ ವರದಿಯನ್ನು ನೀಡಿರುತ್ತಾರೆ.

ದೂರಿನ ಕುರಿತು ವಿಚಾರಣೆ ನಡೆಸಲಾಗಿ, 2010–11ನೇ ಸಾಲಿನಲ್ಲಿ ಸದರಿ ಎದುರುದಾರರು ಅವರ ಅಧಿಕಾರಾವಧಿಯಲ್ಲಿ ಎಂಜಿಎನ್‌ಆರ್‌ಇಜಿಎ ನಿಯಮಗಳಲ್ಲಿ ಅವಕಾಶ ಇಲ್ಲದಿದ್ದರೂ ಸದರಿ ಯೋಜನೆಯಡಿ ಉದ್ಬೂರು ಗ್ರಾಮದಲ್ಲಿನ ಚಿಕ್ಕಕೆರೆ ಕಾಮಗಾರಿಯನ್ನು ನಿರ್ವಹಿಸಿ ಅದರ ಸಾಮಗ್ರಿ ಮೊತ್ತ ರೂ.59,040/–ಗಳನ್ನು ಪಡೆದಿರುವುದು ನಿಯಮ ಬಾಹಿರವಾಗಿದೆಯೆಂಬ ಅಂಶವನ್ನು ದಾಖಲಾತಿಗಳೊಂದಿಗೆ ವರದಿಯನ್ನು ದಿನಾಂಕ:22.08.2017ರ ಪತ್ರದ ಮುಖಾಂತರ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಸಲ್ಲಿಸಲಾಗಿದೆಯೆಂದು ಹೇಳಿದ್ದಾರೆ. ಸದರಿ ದೂರಿಗೆ ಸಂಬಂಧಪಟ್ಟ ಹಣ ದುರುಪಯೋಗಕ್ಕೆ ಕಾರಣರಾದ ಉದ್ಬೂರು ಗ್ರಾಮ ಪಂಚಾಯಿತಿಯ ಕಾರ್ಯದರ್ಶಿ ಹಾಗೂ ಆಡಳಿತಾಧಿಕಾರಿಯವರನ್ನು ದೂರಿನಲ್ಲಿ ಎದುರುದಾರರನ್ನಾಗಿ ಮುಖಪುಟದಲ್ಲಿ ಸೇರಿಸಿ, ಸದರಿಯವರುಗಳಿಂದ ಆಕ್ಷೇಪಣೆಯನ್ನು ಕೇಳಲಾಗಿ, 2ನೇ ಎದುರುದಾರರ ಪರವಾಗಿ

ಉದ್ಬೂರು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯವರು ದಿನಾಂಕ:16.07.2018 ರ ತಮ್ಮ ಪತ್ರದಲ್ಲಿ 1ನೇ ಎದುರುದಾರರು 2010ನೇ ವರ್ಷದಲ್ಲಿ ಗ್ರಾಮ ಪಂಚಾಯತ್ ಸದಸ್ಯರಾಗಿರುವುದಿಲ್ಲ, ಅವರು ಟ್ರ್ಯಾಕ್ಟರ್ ಮಾಲೀಕರಾಗಿರುತ್ತಾರೆ. ಪ್ರಕರಣ ನಡೆದ ಸಂದರ್ಭದಲ್ಲಿ ಇದಕ್ಕೆ ಸಂಬಂಧಿಸಿದಂತೆ, ಗ್ರಾಮ ಪಂಚಾಯತ್ ಸಭೆಯಲ್ಲಾಗಲೀ ಅಥವಾ ಮೌಖಿಕವಾಗಲಿ ಯಾವುದೇ ದೂರು ಮನವಿಯನ್ನು ನೀಡಿಲ್ಲ ಹಾಗೂ ಪ್ರತಿಭಟನೆಯನ್ನು ಮಾಡಿಲ್ಲ, ಇದುವರೆವಿಗೂ ಗ್ರಾಮಸ್ಥರಿಂದಾಗಲೀ ಅಥವಾ ಗ್ರಾಮ ಪಂಚಾಯತ್ ಸದಸ್ಯರಿಂದಾಗಲೀ ಯಾವುದೇ ದೂರುಗಳು ಬಂದಿಲ್ಲ. ಒಂದು ವೇಳೆ ಸದರಿ ಕಾಮಗಾರಿಯಲ್ಲಿ ಯಾವುದೇ ರೀತಿ ಅವ್ಯವಹಾರ ನಡೆದಿದ್ದರೆ, ದೂರು ಸಲ್ಲಿಸಲು ಎಂಟು ವರ್ಷ ಕಾಲದ ಅವಶ್ಯಕತೆಯಿತ್ತೇ ಎಂಬುದು ಗಮನಿಸಬೇಕಾದ ಅಂಶವಾಗಿದ್ದು, ಇದೊಂದು ದುರುದ್ದೇಶದಿಂದ ಸಲ್ಲಿಸಿರುವ ದೂರಾಗಿದೆಯೆಂದು ಹೇಳುತ್ತಾರೆ, 2ನೇ ಎದುರುದಾರರ ಸಹಿ ಇರುವ ಸೇವಾ ವಿವರವನ್ನು ಸಲ್ಲಿಸಿದ್ದಾರೆ.

ಮೂರನೇ (3ನೇ) ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ- ಶ್ರೀ ಕುಮಾರ್ ಬಿನ್ ನಿಂಗಣ್ಣ ರವರು 2009-10ನೇ ಸಾಲಿನಲ್ಲಿ ಗ್ರಾಮ ಪಂಚಾಯತ್ ಸದಸ್ಯರಾಗಿರುವುದಿಲ್ಲ. ಸದರಿಯವರು ಟ್ರ್ಯಾಕ್ಟರ್ ಮಾಲೀಕರಾಗಿದ್ದು, ಎಂಜಿಎನ್ಆರ್ಇಜಿಎ ಯೋಜನೆಯಲ್ಲಿ ಉದ್ಬೂರು ಗ್ರಾಮದ ಚಿಕ್ಕಕೆರೆ ಹೂಳೆತ್ತುವ ಕಾಮಗಾರಿಯನ್ನು ಸದರಿಯವರು ನಿರ್ವಹಿಸಿದ ಬಾಬ್ತು ಅವರಿಗೆ ರೂ.59,040/-ನ್ನು ಪಾವತಿಸಿರುವಲ್ಲಿ ಯಾವುದೇ ಲೋಪದೋಷಗಳು ನಡೆದಿಲ್ಲವೆಂದು ಹೇಳಿದ್ದಾರೆ.

ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:

ಉದ್ಬೂರು ಗ್ರಾಮ ಪಂಚಾಯತಿಯ ಸದಸ್ಯರಾಗಿ 1ನೇ ಎದುರುದಾರರು ಆಯ್ಕೆಯಾಗಿರುವುದು ಮೈಸೂರು ಜಿಲ್ಲಾಧಿಕಾರಿಗಳ ಅಧಿಸೂಚನೆ ಸಂಖ್ಯೆ:ಇಎಲ್ಎನ್.ಗ್ರಾಪಂ.18(26)/2010-11 ದಿನಾಂಕ:21.05.2010ರಲ್ಲಿ ಪ್ರಕಟಿಸಿದೆ. ಉದ್ಬೂರು ಗ್ರಾಮದ ಚಿಕ್ಕಕೆರೆಯ ಹೂಳು ತೆಗೆಯುವ ಕೆಲಸ ನಿರ್ವಹಿಸಿದ ಅವರ ಜೆ.ಸಿ.ಬಿಯ ಬಾಡಿಗೆಯ ಬಾಬ್ತು ಸದರಿಯವರಿಗೆ ರೂ.59,040/-ಗಳನ್ನು ಕಾವೇರಿ ಕಲ್ಪತರು ಗ್ರಾಮೀಣ ಬ್ಯಾಂಕಿನ ಚೆಕ್ ಸಂಖ್ಯೆ:970550 ಮುಖಾಂತರ ದಿನಾಂಕ:21.05.2010ರಂದು ಸಂದಾಯ ಮಾಡಿರುವುದು ದಾಖಲೆಗಳಿಂದ ಕಂಡು ಬಂದಿದೆ. 1ನೇ ಎದುರುದಾರರು ಸದಸ್ಯರಾಗಿ ಚುನಾಯಿತರಾಗುವ ಮೊದಲೇ ನಡೆದಿದ್ದು, ಅದರ ಬಾಬ್ತು ಹಣ ಸಂದಾಯವು ಅವರಿಗೆ ದಿನಾಂಕ:21.05.2010ರಂದು ಆಗಿರುವುದು ಕಂಡು ಬಂದಿದೆ.

ಎಂಜಿಎನ್ಆರ್ಇಜಿಎ ಮಾರ್ಗಸೂಚಿಗಳನ್ವಯ ಸದರಿ ಕಾಮಗಾರಿಯನ್ನು 1ನೇ ಎದುರುದಾರರು ಜೆ.ಸಿ.ಬಿ.ಯಿಂದ ನಿರ್ವಹಿಸಿರುವ ಬಗ್ಗೆ ಯಾವುದೇ ದಾಖಲೆಗಳಲ್ಲಿ, ಕಾಮಗಾರಿ ನಿರ್ವಹಿಸಿ ಕೂಲಿ ಹಣ ಅವರ ಖಾತೆಗೆ ಜಮಾ ಆದ ಬಗ್ಗೆ ಅವರ ಬ್ಯಾಂಕ್ ಪುಸ್ತಕದ ಪ್ರತಿಯಾಗಲೀ ಅಥವಾ ಅವರ ಖಾತೆಯ ತಃಖ್ತೆಯನ್ನಾಗಲೀ ಸಲ್ಲಿಸಿಲ್ಲ, ಜಾಬ್ ಕಾರ್ಡ್ ಹೊಂದಿರುವ ಬಗ್ಗೆ ಉದ್ಯೋಗ ಕೋರಿ ಪಂಚಾಯತ್‌ಗೆ ಅರ್ಜಿ ಸಲ್ಲಿಸಿದ ಬಗ್ಗೆ ಯಾವುದೇ ದಾಖಲೆಗಳಿಲ್ಲ, ಹೊಳೆತ್ತುವ ಕಾಮಗಾರಿಯ ಅಂದಾಜು ರೂ.10 ಲಕ್ಷವೆಂದು ಹೇಳಲಾಗಿದ್ದು, ಅದರ ಬಾಬ್ತು ಟೆಂಡರ್ ಕರೆಯದೇ ಕಾಮಗಾರಿಯನ್ನು ವಹಿಸಿರುವುದು ಕಂಡು ಬಂದಿದೆ. ಸದರಿ ಕಾಮಗಾರಿಯು ಪೂರ್ಣಗೊಂಡಿರುವ ಬಗ್ಗೆ ಆ ಕಾಮಗಾರಿಯ ಫೋಟೋ ಅಥವಾ ಸಿಡಿಯನ್ನು ಸಲ್ಲಿಸಿಲ್ಲ.

2 ಮತ್ತು 3ನೇ ಎದುರುದಾರರು 2009-10ನೇ ಸಾಲಿನಲ್ಲಿ ಕ್ರಮವಾಗಿ, ಉದ್ಬೂರು ಗ್ರಾಮ ಪಂಚಾಯತ್ ಕಾರ್ಯದರ್ಶಿ ಮತ್ತು ಆಡಳಿತಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ್ದು, ಮೇಲೆ ಹೇಳಿದ ನ್ಯೂನತೆಗಳಿಗೆ ಸದರಿಯವರೇ ಜವಾಬ್ದಾರರಾಗಿದ್ದು ಮತ್ತು ಸದರಿಯವರೇ 1ನೇ ಎದುರುದಾರರಿಗೆ ಕಾಮಗಾರಿಯ ಬಾಬ್ತು ರೂ.59,040/- ಚೆಕ್ ಅನ್ನು ನೀಡಿರುವುದು ಕಡತ ಪರಿಶೀಲನೆಯಲ್ಲಿ ಸ್ಪಷ್ಟವಾಗಿ ಕಂಡು ಬಂದಿದೆ.

ಈ ಹಿನ್ನೆಲೆಯಲ್ಲಿ, ಶ್ರೀ ಎಸ್.ನಾಗೇಶ್ ನಿವೃತ್ತ ಕಾರ್ಯದರ್ಶಿ, ಉದ್ಬೂರು ಗ್ರಾಮ ಪಂಚಾಯಿತಿ ಮೈಸೂರು ತಾಲ್ಲೂಕು ಮತ್ತು ಮೈಸೂರು ಜಿಲ್ಲೆ ರವರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಾಮಗಳು 1996 ರ ನಿಯಮ 3(1) ರ ಅಡಿಯಲ್ಲಿ ದುರ್ನಡತೆ/ದುರ್ವತನೆ ಕಂಡು ಬಂದಿರುವುದರಿಂದ ಸದರಿ ನೌಕರನು ದಿನಾಂಕ: 30.09.2014 ರಂದು ವಯೋನಿವೃತ್ತಿ ಹೊಂದಿರುವುದರಿಂದ ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು 1957ರ ನಿಯಮ 214(2)(ಬಿ)(1) ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ದೂರುದಾರರು ದೂರು ಹಾಗೂ ತನಿಖಾಧಿಕಾರಿಗಳ ವರದಿ ಹಾಗೂ ಕಡತದಲ್ಲಿರುವ ದಾಖಲೆಗಳನ್ನು ಪರಿಶೀಲಿಸಿದಾಗ, ಮೇಲ್ನೋಟಕ್ಕೆ 2ನೇ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ನಡೆಸುವ ಸಂಬಂಧ ಮುಂದುವರಿಯುವುದು ಅಗತ್ಯ ಎಂದು ಕಂಡುಬಂದಿದ್ದು, 2ನೇ ಎದುರುದಾರರು ಕರ್ತವ್ಯಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮವನ್ನು ಉಲ್ಲಂಘಿಸಿ, ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಸಾಬೀತಾಗುತ್ತದೆ.

ಮೇಲ್ಕಂಡ ಅಂಶಗಳು, ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ಇಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿ, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರ ಅಡಿ ಕ್ರಮ ಕೈಗೊಳ್ಳಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಾಮಗಳು 1966ರ 3(1) ರಡಿಯಲ್ಲಿ ದುರ್ನಡತೆಯೆಸಗಿದ್ದು, ಶಿಸ್ತು ಕ್ರಮಕ್ಕೆ ಭಾಧ್ಯರಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ಎದುರುದಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ಶ್ರೀ ಎಸ್.ನಾಗೇಶ್ ನಿವೃತ್ತ ಕಾರ್ಯದರ್ಶಿ, ಉದ್ಬೂರು ಗ್ರಾಮ ಪಂಚಾಯಿತಿ ಮೈಸೂರು ತಾಲ್ಲೂಕು ಮತ್ತು ಮೈಸೂರು ಜಿಲ್ಲೆ ರವರು ದಿನಾಂಕ: 30.09.2014ರಂದು ವಯೋನಿವೃತ್ತಿ ಹೊಂದಿರುವುದರಿಂದ ಇವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ 214(2)(ಬಿ)(i) ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ಪ್ರಕರಣವನ್ನು ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/584/ಗ್ರಾಪಂಕಾ/2018,**

**ಬೆಂಗಳೂರು, ದಿನಾಂಕ:17-01-2019**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಎಸ್.ನಾಗೇಶ್ ನಿವೃತ್ತ ಕಾರ್ಯದರ್ಶಿ, ಉದ್ಬೂರು ಗ್ರಾಮ ಪಂಚಾಯಿತಿ ಮೈಸೂರು ತಾಲ್ಲೂಕು ಮತ್ತು ಮೈಸೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ 214(2)(ಬಿ)(i) ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
18/1/19
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಮೂಲ ದಾಖಲೆಗಳನ್ನು ಇದರೊಂದಿಗೆ ಹಿಂದಿರುಗಿಸಿದೆ. ಪುಟ ಸಂಖ್ಯೆ: 1 ರಿಂದ 55).

4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ.
6. ಶ್ರೀ ಎಸ್.ನಾಗೇಶ್ ನಿವೃತ್ತ ಕಾರ್ಯದರ್ಶಿ, ಉದ್ಬೂರು ಗ್ರಾಮ ಪಂಚಾಯಿತಿ ಮೈಸೂರು ತಾಲ್ಲೂಕು ಮತ್ತು ಮೈಸೂರು ಜಿಲ್ಲೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
8. ಗಣಕ ಕೋಶ.